## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 673

ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸ ಬೇಕಾದ ದಿನಾಂಕ : 04.03.2021

ಉತ್ತರಿಸ ಬೇಕಾದ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯ ಸರ್ಕಾರಿ ನೌಕರರಿಗೆ ಯಾವಾಗಿನಿಂದ ತುಟ್ಟಿಭತ್ಯೆ (D.A.) ಯನ್ನು ತಡೆಹಿಡಿಯಲಾಗಿದೆಯೇ; | 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ, 2018ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿಗಳಲ್ಲಿ ತುಟ್ಟಿಭತ್ಯೆಯನ್ನು ಮಂಜೂರು ಮಾಡುವಲ್ಲಿ, ಕೇಂದ್ರ ಸರ್ಕಾರದ ತುಟ್ಟಿಭತ್ಯೆ ದರಗಳೊಂದಿಗೆ ಹೋಲಿಸಿ, ಲೆಕ್ಕಹಾಕಿ ಮಂಜೂರು ಮಾಡಲಾಗುತ್ತದೆ.<br><br>ಕೋವಿಡ್-19ರ ಸಂಕಷ್ಟದ ಕಾರಣ ಕೇಂದ್ರ ಸರ್ಕಾರವು ಕೇಂದ್ರ ಸರ್ಕಾರದ ನೌಕರರಿಗೆ ದಿನಾಂಕ: 01-01-2020ರಿಂದ ಜಾರಿಗೆ ಬರುವಂತೆ ತುಟ್ಟಿಭತ್ಯೆಯನ್ನು ಸ್ಥಗಿತಗೊಳಿಸಿ ಆದೇಶಿಸಿರುತ್ತದೆ. ಆದುದರಿಂದ, ರಾಜ್ಯ ಸರ್ಕಾರಿ ನೌಕರರಿಗೂ ಕೂಡ ದಿನಾಂಕ: 01-01-2020ರಿಂದ ಜಾರಿಗೆ ಬರುವಂತೆ ಲಭ್ಯವಿರುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಲಾಗಿರುತ್ತದೆ. |
| (ಆ) | ಲಾಕ್‌ಡೌನ್ ಮುಗಿದು ಆರ್ಥಿಕ ಪರಿಸ್ಥಿತಿ ಸುಧಾರಿಸಿರುವುದರಿಂದ ತಡೆಹಿಡಿದಿರುವ ತುಟ್ಟಿಭತ್ಯೆ (D.A.) ಯನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | |
| (ಇ) | ನೌಕರರಿಗೆ ಯಾವಾಗ ತುಟ್ಟಿಭತ್ಯೆ (D.A.) ಬಿಡುಗಡೆ ಮಾಡಲಾಗುವುದು? (ವಿವರ ನೀಡುವುದು.) | ಕೇಂದ್ರ ಸರ್ಕಾರವು ತನ್ನ ನೌಕರರಿಗೆ ತುಟ್ಟಿಭತ್ಯೆಗಳನ್ನು ಮಂಜೂರು ಮಾಡಿ ಆದೇಶ ಹೊರಡಿಸಿದ ನಂತರ ಅದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |

**ಸಂ: ಆಇ 6 ಎಸ್‌ಆರ್‌ಪಿ 2021**

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ.